# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1809 (2045) |
| ಮಾನ್ಯ ಸದಸ್ಯರ ಹೆಸರು | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 17/03/2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೂಲಿ ಕಾರ್ಮಿಕರ ಅಂಕಿ ಸಂಖ್ಯೆ ಎಷ್ಟು; ಅದರಲ್ಲಿ ಪುರುಷ, ಮಹಿಳೆ ಹಾಗೂ ಅಂಗವಿಕಲರ ಸಂಖ್ಯೆ ಎಷ್ಟು; (ವಿವರ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ಮಂಡಳಿಗಳು ಜಾರಿಗೊಳಿಸುತ್ತಿರುವ ಯೋಜನೆಗಳಡಿ ಫಲಾನುಭವಿಗಳಾಗಿ ನೋಂದಾಯಿತರಾಗಿರುವ ಕಾರ್ಮಿಕರ ವಿವರಗಳು ಈ ಕೆಳಗಿನಂತಿವೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-</u>**<br><br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಫಲಾನುಭವಿಗಳಾಗಿ ಕಲಬುರಗಿ ಜಿಲ್ಲೆಯಲ್ಲಿ ಒಟು 1,53,977 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಿರುತ್ತಾರೆ. ಇದರಲ್ಲಿ 76,621 ಪುರುಷ ಕಾರ್ಮಿಕರು 77,356 ಮಹಿಳಾ ಕಾರ್ಮಿಕರು ನೋಂದಣಿಯಾಗಿರುತ್ತಾರೆ. ಯಾದಗಿರಿ ಜಿಲ್ಲೆಯಲ್ಲಿ 58,829 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮಂಡಳಿಯ ಫಲಾನುಭವಿಗಳಾಗಿ ನೋಂದಣಿಯಾಗಿರುತ್ತಾರೆ. ಇದರಲ್ಲಿ 35,672 ಮಹಿಳಾ ಕಾರ್ಮಿಕರು ಮತ್ತು 23,157 ಪುರುಷ ಕಾರ್ಮಿಕರು ನೋಂದಣಿಯಾಗಿರುತ್ತಾರೆ. ನೋಂದಣಿಯಾದ ಅಂಗವಿಕಲ ಕಾರ್ಮಿಕರ ಮಾಹಿತಿ ಮಂಡಳಿಯಲ್ಲಿ ಇರುವುದಿಲ್ಲ. |

| | | |
|---|---|---|
| | | **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-**<br>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳು/ ಕೋವಿಡ್-19ರ ವಿಶೇಷ ಪ್ಯಾಕೇಜ್‌ನಡಿ ಹಾಗೂ ಕೇಂದ್ರ ಸರ್ಕಾರದ ಇ-ಶ್ರಮ್ ಪೋರ್ಟಲ್‌ನಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ, ನೊಂದಾಯಿತ ಅಸಂಘಟಿತ ಕಾರ್ಮಿಕರ ವಿವರವನ್ನು **ಅನುಬಂಧದಲ್ಲಿ** ಒದಗಿಸಿದೆ. |
| ಆ) | ಮಹಿಳೆ ಮತ್ತು ಅಂಗವಿಕಲ ಕೂಲಿ ಕಾರ್ಮಿಕರಿಗೆ ಸರ್ಕಾರದಿಂದ ಸಿಗುತ್ತಿರುವ ಸೌಲಭ್ಯಗಳಾವುವು; (ವಿವರ ನೀಡುವುದು) | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**<br>ಮಂಡಳಿಯ ವತಿಯಿಂದ ರೂಪಿಸಿರುವ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದ್ದು, ಸದರಿ ಸೌಲಭ್ಯಗಳಡಿ ಮಹಿಳೆಯರಿಗಾಗಿ ಈ ಕೆಳಕಂಡ ಸೌಲಭ್ಯಗಳನ್ನು ರೂಪಿಸಲಾಗಿದೆ.<br>1. ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್): ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ ರೂ. 30,000/- ಮತ್ತು ಗಂಡು ಮಗುವಿನ ಜನನಕ್ಕೆ ರೂ.20,000/-<br>2. ಶಿಶು ಪಾಲನಾ ಸೌಲಭ್ಯ: ಕಟ್ಟಡ ಕಾರ್ಮಿಕರು ಕೆಲಸ ನಿರ್ವಹಿಸುವ ಸ್ಥಳದಲ್ಲಿ 6 ವರ್ಷದ ವರೆಗಿನ ಮಕ್ಕಳ ಪಾಲನೆಗಾಗಿ ಶಿಶು ಪಾಲನಾ ಕೇಂದ್ರಗಳನ್ನು ರಾಜ್ಯದಾದ್ಯಂತ ಸ್ಥಾಪಿಸಲಾಗಿದೆ.<br>3. ತಾಯಿ ಮಗು ಸಹಾಯ ಹಸ್ತ: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ ರೂ.6,000/- ಗಳ ಸಹಾಯಧನ.<br>ಅಂಗವಿಕಲ ಕೂಲಿ ಕಾರ್ಮಿಕರಿಗಾಗಿ ಮಂಡಳಿಯ ವತಿಯಿಂದ ಪ್ರತ್ಯೇಕ ಯೋಜನೆಯನ್ನು ರೂಪಿಸಿರುವುದಿಲ್ಲ. |

| | | |
|---|---|---|
| | | **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-**<br>ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ರಾಜ್ಯ ಸರ್ಕಾರದ ಈ ಕೆಳಕಂಡ ಸಾಮಾಜಿಕ ಭದ್ರತಾ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ಒದಗಿಸುತ್ತಿರುವ ಸೌಲಭ್ಯಗಳ ವಿವರ ಈ ಕೆಳಗಿನಂತಿದೆ.<br><br>1. **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**<br><br>**ಅ) ಅಪಘಾತ ಪರಿಹಾರ:-**<br>ಅಪಘಾತದಿಂದ ಮೃತರಾದ ಪ್ರಕರಣಗಳಲ್ಲಿ ಅವರ ನಾಮನಿರ್ದೇಶಿತರಿಗೆ ರೂ. 5 ಲಕ್ಷ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಪ್ರಕರಣಗಳಲ್ಲಿ ರೂ.2 ಲಕ್ಷಗಳವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದ ವರೆಗೆ ಚಿಕಿತ್ಸಾ ವೆಚ್ಚ ಮರುಪಾವತಿ ಮಾಡಲಾಗುತ್ತಿದೆ.<br><br>**ಆ) ಶೈಕ್ಷಣಿಕ ಧನ ಸಹಾಯ:-**<br>ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಒಂದನೇ ತರಗತಿಯಿಂದ ಪದವಿಪೂರ್ವ ತರಗತಿಯ ವರೆಗೆ ವ್ಯಾಸಂಗ ಮಾಡಲು ವಾರ್ಷಿಕ ತಲಾ ರೂ.10,000/- ರಂತೆ ಶೈಕ್ಷಣಿಕ ಸಹಾಯ ಧನ ವಿತರಿಸಲಾಗುತ್ತಿದೆ,<br><br>2. **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**<br>ಪ್ರಸ್ತುತ, 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು "ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ"ಯಡಿ ಕಾರ್ಮಿಕರನ್ನು ನೋಂದಾಯಿಸಿ ಸ್ಮಾರ್ಟ್‌ಕಾರ್ಡ್ ವಿತರಿಸಲಾಗಿದೆ. ಸದರಿ ಯೋಜನೆಯಡಿ ಯಾವುದೇ ಆರ್ಥಿಕ ಸೌಲಭ್ಯ ನೀಡಲಾಗುತ್ತಿಲ್ಲ. |

| | | |
|---|---|---|
| | | **3. ಇ-ಶ್ರಮ್ ಕಾರ್ಡ್:-**<br>ಕೇಂದ್ರ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಯನ್ವಯ ಇ-ಶ್ರಮ್ ಪೋರ್ಟಲ್‌ನಲ್ಲಿ ಎಲ್ಲಾ ನೋಂದಾಯಿತ ಅಸಂಘಟಿತ ಕಾರ್ಮಿಕರು ಒಂದು ವರ್ಷದಅವಧಿಗೆ ಕೇಂದ್ರ ಸರ್ಕಾರವು ಜಾರಿಗೊಳಿಸುತ್ತಿರುವ ಪ್ರಧಾನ ಮಂತ್ರಿ ಸುರಕ್ಷಾ ಬಿಮಾಯೋಜನೆ (PMSBY)ಯಡಿ ದೊರೆಯುವ, "ಅಪಘಾತದಿಂದ ಮರಣ ಹೊಂದಿದಲ್ಲಿ ಅಥವಾ ಶಾಶ್ವತದುರ್ಬಲತೆ ಹೊಂದಿದಲ್ಲಿ ರೂ.2 ಲಕ್ಷ ಹಾಗೂ ಭಾಗಶಃ ಅಂಗವೈಕಲ್ಯಕ್ಕೆ ರೂ.1 ಲಕ್ಷ ಪರಿಹಾರ"ದ ಪ್ರಯೋಜನ ಪಡೆಯಬಹುದಾಗಿರುತ್ತದೆ.<br>ಮೇಲ್ಕಂಡ ಸೌಲಭ್ಯಗಳು ಮಹಿಳೆ ಮತ್ತು ಅಂಗವಿಕಲರು ಸೇರಿದಂತೆ, ಎಲ್ಲಾ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಅನ್ವಯವಾಗುತ್ತದೆ. |
| ಇ) | ಮೇಲ್ಕಂಡ ಜಿಲ್ಲೆಯು ಹೈದ್ರಾಬಾದ್-ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವುದರಿಂದ ಕೂಲಿ ಕಾರ್ಮಿಕರಿಗಾಗಿ ವಿಶೇಷ ಯೋಜನೆಯನ್ನು ರೂಪಿಸುವ ಯೋಜನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು) | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**<br>ಮಂಡಳಿಯ ವತಿಯಿಂದ ರೂಪಿಸಿರುವ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರಾಜ್ಯದಾದ್ಯಂತ ನೋಂದಾಯಿತ ಎಲ್ಲಾ ಅರ್ಹ ಫಲಾನುಭವಿಗಳು ಪಡೆಯಲು ಅರ್ಹರಿರುತ್ತಾರೆ. ಆದ್ದರಿಂದ ಹೈದ್ರಾಬಾದ್-ಕರ್ನಾಟಕ ಪ್ರದೇಶದ ವ್ಯಾಪ್ತಿಯ ಕಾರ್ಮಿಕರಿಗೆ ವಿಶೇಷ ಯೋಜನೆಯನ್ನು ರೂಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-**<br>ಹೈದ್ರಾಬಾದ್-ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಕೂಲಿ ಕಾರ್ಮಿಕರಿಗಾಗಿ ಮಂಡಳಿಯಿಂದ ಪ್ರಸ್ತುತ ಯಾವುದೇ ಪ್ರತ್ಯೇಕ ವಿಶೇಷ ಯೋಜನೆಯನ್ನು ರೂಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |

**ಕಾಇ 181 ಎಲ್‌ಇಟಿ 2022**

(ಅರಬೈಲ್ ಶಿವರಾಮ್ ಹೆಬ್ಬಾರ್)
ಕಾರ್ಮಿಕ ಸಚಿವರು

## ಅನುಬಂಧ

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ:2045**

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ನೋಂದಾಯಿತ ಅಸಂಘಟಿತ ಕಾರ್ಮಿಕರ ಮಾಹಿತಿ.**

| ಯೋಜನೆ ಹೆಸರು | ನೊಂದಾಯಿತ ಕಾರ್ಮಿಕರ ಸಂಖ್ಯೆ | | | | ಷರಾ |
|---|---|---|---|---|---|
| | ಕಲಬುರಗಿ | | ಯಾದಗಿರಿ | | |
| | ಪುರುಷ | ಮಹಿಳೆ | ಪುರುಷ | ಮಹಿಳಾ | |
| ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ | 1805 | 2486 | 1775 | 1497 | – |
| ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | 27470 (ಸಾರಿಗೆ ಇಲಾಖೆಯ ದತ್ತಾಂಶ) | | 7291 (ಸಾರಿಗೆ ಇಲಾಖೆಯ ದತ್ತಾಂಶ) | | ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಲಾಯಿಸಲು ಸಾರಿಗೆ ಇಲಾಖೆಯಿಂದ ಊರ್ಜಿತ ಚಾಲನಾ ಪರವಾನಗಿ ಹೊಂದಿದ ಎಲ್ಲಾ ಚಾಲಕರನ್ನು ಯೋಜನೆಯಡಿ ಫಲಾನುಭವಿಗಳೆಂದು ಪರಿಗಣಿಸುತ್ತಿದ್ದು, ಪ್ರತ್ಯೇಕ ನೋಂದಣಿ ಇರುವುದಿಲ್ಲ ಹಾಗೂ ಪುರುಷ ಹಾಗೂ ಮಹಿಳೆಯರ ಪ್ರತ್ಯೇಕ ಸಂಖ್ಯೆ ಲಭ್ಯವಿರುವುದಿಲ್ಲ. |
| ಕೋವಿಡ್–19ರ ವಿಶೇಷ ನೆರವಿನ ಪ್ಯಾಕೇಜ್ | 32119 | 91157 | 9070 | 18986 | – |
| ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರು | 132957 | 158946 | 56371 | 54235 | – |